# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **444** |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್.ಗೋಪಿನಾಥ್<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 19-08-2026 |
| ಉತ್ತರಿಸುವ ಸಚಿವರು | : | ಇಂಧನ ಮತ್ತು ಪ್ರವಾಸೋದ್ಯಮ ಸಚಿವರು |

****

| | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 2 ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕ ಕೋರಿ ಬೆಸ್ಕಾಂಗೆ ಬಂದ ಅರ್ಜಿಗಳ ಸಂಖ್ಯೆ ಎಷ್ಟು ಮತ್ತು ಇವರೆಗೂ ಎಷ್ಟು ಸಂಪರ್ಕ ನೀಡಲಾಗಿದೆ: ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; | ಬೆಸ್ಕಾಂ ವ್ಯಾಪ್ತಿಯಲ್ಲಿ, ಕಳೆದ 2 ವರ್ಷಗಳಲ್ಲಿ, ಬೆಂಗಳೂರು ನಗರ ಜಿಲ್ಲೆಯಲ್ಲಿ ವಿದ್ಯುತ್ ಸಂಪರ್ಕ ಕೋರಿ ಬಂದ ಅರ್ಜಿಗಳ ಸಂಖ್ಯೆ, ಸಂಪರ್ಕ ಕಲ್ಪಿಸಲಾದ ಅರ್ಜಿಗಳ ಸಂಖ್ಯೆ ಮತ್ತು ಬಾಕಿ ಇರುವ ಅರ್ಜಿಗಳ ಸಂಖ್ಯೆಯ ವಿವರಗಳು ಕೆಳಕಂಡಂತಿವೆ: (ಕೆಳಗಿನ ಕೋಷ್ಟಕ) |

| ಆರ್ಥಿಕ ವರ್ಷ | ವಿದ್ಯುತ್ ಸಂಪರ್ಕ ಕೋರಿ ಸಲ್ಲಿಸಲಾದ ಅರ್ಜಿಗಳ ಸಂಖ್ಯೆ | ವಿದ್ಯುತ್ ಸಂಪರ್ಕ ಕಲ್ಪಿಸಲಾದ ಅರ್ಜಿಗಳ ಸಂಖ್ಯೆ | ವಜಾಗೊಂಡ ಅರ್ಜಿಗಳ ಸಂಖ್ಯೆ | ವಿದ್ಯುತ್ ಸಂಪರ್ಕ ಕಲ್ಪಿಸಲು ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ |
|---|---|---|---|---|
| 2024-25 | 160020 | 110298 | 35200 | 14522 |
| 2025-26 | 67978 | 46787 | 12534 | 8657 |
| 2026-27 (14-08.26ರ ವರೆಗೆ | 72700 | 22165 | 4449 | 46086 |

| | ಪ್ರಶ್ನೆ | ಉತ್ತರ |
|---|---|---|
| ಆ) | ವಿದ್ಯುತ್ ಸಂಪರ್ಕಕ್ಕಾಗಿ ಸುಪ್ರೀಂ ಕೋರ್ಟ್ ಸಿ.ಸಿ ಮತ್ತು ಒ.ಸಿಯನ್ನು ಪಡೆಯುವಂತೆ ಆದೇಶಿಸಿದ ದಿನಾಂಕ ಯಾವುದು: ಇಂಧನ ಇಲಾಖೆ ಇದರ ಬಗ್ಗೆ ಯಾವ ದಿನಾಂಕದಿಂದ ಸುತ್ತೋಲೆ ಹೊರಡಿಸಿದೆ: (ಸುತ್ತೋಲೆ ಪ್ರತಿಯನ್ನು ನೀಡುವುದು) | ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸಕ್ಷಮ/ಸ್ಥಳೀಯ ಪ್ರಾಧಿಕಾರದಿಂದ ನೀಡಿರುವ ಸ್ವಾಧೀನಾನುಭವ ಪ್ರಮಾಣ ಪತ್ರವನ್ನು ಅರ್ಜಿದಾರರು ಸಲ್ಲಿಸುವುದು ಕಡ್ಡಾಯವೆಂದು ಘನ ಸರ್ವೋಚ್ಚ ನ್ಯಾಯಾಲಯವು ದಿನಾಂಕ: 17.12.2024 ರಂದು ಆದೇಶ ಹೊರಡಿಸಿರುತ್ತದೆ.<br><br>ಈ ಹಿನ್ನಲೆಯಲ್ಲಿ, ಇಂಧನ ಇಲಾಖೆಯು ದಿನಾಂಕ: 04.01.2025ರ ಪತ್ರದಲ್ಲಿ ಎಲ್ಲಾ ಎಸ್ಕಾಂಗಳಿಗೆ ಮಾನ್ಯ ಘನ ಸರ್ವೋಚ್ಚ ನ್ಯಾಯಲಯದ ಆದೇಶವನ್ನು ಅನುಷ್ಠಾನಗೊಳಿಸಲು ನಿಯಮಾನುಸಾರ ಅಗತ್ಯ ಕ್ರಮ ವಹಿಸುವಂತೆ ತಿಳಿಸಿರುತ್ತದೆ. (**ಅನುಬಂಧ**ದಲ್ಲಿ ಒದಗಿಸಲಾಗಿದೆ) |
| ಇ) | ಕಂದಾಯ ನಿವೇಶನ ಮತ್ತು ಬಿ ಖಾತೆಗಳಿಗೆ ಸಿ.ಸಿ ಮತ್ತು ಒ.ಸಿ ಸಿಗದ ಕಾರಣ ವಿದ್ಯುತ್ ಸಂಪರ್ಕ ಸಿಗದೆ ಸಾರ್ವಜನಿಕರು ತೊಂದರೆಗೆ ಸಿಲುಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮವೇನು? | ವಿದ್ಯುತ್ ಸರಬರಾಜು ಕಂಪನಿಗಳ ವ್ಯಾಪ್ತಿಯಲ್ಲಿ ಕಟ್ಟಡದ ಭೌಗೋಳಿಕ ಸ್ಥಳವನ್ನು ('ಎ' ಖಾತಾ, 'ಬಿ' ಖಾತಾ ಮತ್ತು ಕಂದಾಯ) ಪರಿಗಣಿಸದೆ, ಎಲ್ಲಾ ಅರ್ಜಿದಾರರಿಗೂ ಕೆ.ಇ.ಆರ್.ಸಿ.ಯ ವಿದ್ಯುಚ್ಛಕ್ತಿ ಸರಬರಾಜು ಷರತ್ತು 4.00ರ ಅನ್ವಯ ವಿದ್ಯುತ್ ಸಂಪರ್ಕ ಕಲ್ಪಿಸಬೇಕಾಗಿದೆ.<br>ಸಿ.ಸಿ ಮತ್ತು ಒ.ಸಿ ಷರತ್ತಿನ ಕಡ್ಡಾಯಗೊಳಿಸುವಿಕೆಯ ಕುರಿತು ಘನ ಸರ್ವೋಚ್ಚ ನ್ಯಾಯಾಲಯದ ದಿನಾಂಕ 17.12.2024 ರ ಆದೇಶವನ್ನು ಸರ್ಕಾರದ ಮಟ್ಟದಲ್ಲಿ ಕೂಲಂಕುಷವಾಗಿ ಪರಿಶೀಲಿಸಿ, ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆಗಳ ಕುರಿತು ಗಂಭೀರವಾಗಿ ಪರಿಗಣಿಸಿ, ನರಾಭಿವೃದ್ಧಿ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳು 2025 ಮತ್ತು 2026 ನೇ ಸಾಲಿನಲ್ಲಿ ಹಾಗೂ ಇಂಧನ ಇಲಾಖೆಯು ದಿನಾಂಕ 22.6.2026 ರಂದು ಮತ್ತು ತಿದ್ದುಪಡಿಯನ್ನು ದಿನಾಂಕ 4.7.2026 ರಂದು ವಿನಾಯಿತಿ ಆದೇಶಗಳನ್ನು ಹೊರಡಿಸಿರುತ್ತವೆ. |

| | | |
|---|---|---|
| | | ಈ ಆದೇಶಗಳನ್ವಯ ಪ್ರಸ್ತುತ, 2400 ಚದರ ಅಡಿಗಳವರೆಗಿನ ಅಳತೆಯ ನಿವೇಶನಗಳಲ್ಲಿ (+20% ಹೆಚ್ಚುವರಿ ವ್ಯತ್ಯಾಸದ ಮಿತಿಯೊಂದಿಗೆ) ನಿರ್ಮಿಸಲಾಗಿರುವ ಜಿ+3 ಅಂತಸ್ತಿನ ವಸತಿ ಕಟ್ಟಡಗಳು ಅಥವಾ ಸ್ಟಿಲ್ಟ್ ಪಾರ್ಕಿಂಗ್ + 4 ಮಹಡಿಗಳನ್ನು ಹೊಂದಿರುವ ವಸತಿ ಕಟ್ಟಡಗಳು 31.05.2026 ರೊಳಗೆ ಪೂರ್ಣಗೊಂಡು, ಶಾಶ್ವತ ವಿದ್ಯುತ್ ಸಂಪರ್ಕಕ್ಕಾಗಿ 15.08.2026 ರ ಒಳಗೆ ಅರ್ಜಿ ಸಲ್ಲಿಸಿರುವ ವಾಸದ ಕಟ್ಟಡಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಸ್ವಾಧೀನಾನುಭವ ಪ್ರಮಾಣಪತ್ರ ಸಲ್ಲಿಸುವುದರಿಂದ ಒಂದು ಬಾರಿಯ ವಿನಾಯಿತಿ ನೀಡಲಾಗಿದೆ.<br><br>ಇದಲ್ಲದೆ, ಗ್ರಾಮೀಣ ಪ್ರದೇಶದ ಕೋಳಿ ಸಾಕಾಣಿಕೆ ಕೇಂದ್ರಗಳು ಹಾಗೂ ಕೃಷಿ ಸಂಬಂಧಿತ ಚಟುವಟಿಕೆಗಳಿಗೂ ಸಹ ವಿದ್ಯುತ್ ಸಂಪರ್ಕಕ್ಕಾಗಿ ಸ್ವಾಧೀನಾನುಭವ ಪ್ರಮಾಣ ಪತ್ರ ಪಡೆಯುವುದರಿಂದ ವಿನಾಯಿತಿ ನೀಡಿ ಆದೇಶಿಸಿದೆ. |

ಸಂಖ್ಯೆ: ಎನರ್ಜಿ 211 ಇಬಿಎಸ್ 2026

(ಕೆ.ಜೆ.ಜಾರ್ಜ್)

ಇಂಧನ ಮತ್ತು ಪ್ರವಾಸೋದ್ಯಮ ಸಚಿವರು

# ಕರ್ನಾಟಕ ಸರ್ಕಾರ

(45)

ಸಂಖ್ಯೆ: ಎನರ್ಜಿ 943 ಇಇಬಿ 2024
Encl: Mail sent to M.D and T.D

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ:04.01.2025

**ಇವರಿಂದ:**

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು
ಇಂಧನ ಇಲಾಖೆ,
ಬೆಂಗಳೂರು.

**ಇವರಿಗೆ:**

1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಬೆಂಗಳೂರು.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಪವರ್ ಕಂಪನಿ ಆಫ್ ಕರ್ನಾಟಕ ಲಿಮಿಟೆಡ್, ಬೆಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ಕಂಪನಿ, ಮೈಸೂರು.
7. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
8. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರಗಿ.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಕಾರ್ಖಾನೆ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಎಂ.ಇ.ಐ., ಬೆಂಗಳೂರು.
12. ಮುಖ್ಯ ವಿದ್ಯುತ್ ಪರಿವೀಕ್ಷಕರು, ವಿದ್ಯುತ್ ಪರಿವೀಕ್ಷಣಾಲಯ, ಬೆಂಗಳೂರು.

ಮಾನ್ಯರೇ,

ವಿಷಯ: ವಿದ್ಯುತ್ ಸಂಪರ್ಕ ಪಡೆಯಲು ವಾಸಯೋಗ್ಯ ಪ್ರಮಾಣ ಪತ್ರ ಕಡ್ಡಾಯಗೊಳಿಸುವ ಬಗ್ಗೆ.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ವೀರೇಶ್ ಬೇಲೂರು ಇವರು ಮಿಂಚಂಚೆ ಮೂಲಕ ಸಲ್ಲಿಸಿರುವ ದಿನಾಂಕ:20.12.2024ರ ಪತ್ರ ಮತ್ತು ಅಡಕಗಳನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ಕೋರಿರುವಂತೆ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲು ಸಂಖ್ಯೆ:14604/2024ರಲ್ಲಿ ದಿನಾಂಕ:17.12.2024ರಂದು ನೀಡಿರುವ ತೀರ್ಪಿನನ್ವಯ ಪರಿಶೀಲಿಸಿ, ನಿಯಮಾನುಸಾರ ಅಗತ್ಯ ಕ್ರಮ ವಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ವಿನೋದ್ ಕುಮಾರ್ ಡಿ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ



File No. CESC/TECH/OTH/R/2025-TECH (Computer No. 1[illegible])

Scanned with OKEN Scanne